ಅ) ಸಹಾಯಕ ಶಸ್ತ್ರ ಚಿಕಿತ್ಸಕ ಹುದ್ದೆಗಳಿಗೆ ಆಯ್ಕೆಗೊಂಡ ವೈದ್ಯರುಗಳ ಪಟ್ಟಿಯನ್ನು ಕರ್ನಾಟಕ ಲೋಕಸೇವಾ ಆಯೋಗವು ಕಳುಹಿಸಿಕೊಟ್ಟಿದೆ. ಖಾಲಿ ವೈದ್ಯರ ಹುದ್ದೆಗಳನ್ನು ಶೀಘ್ರದಲ್ಲಿಯೇ ತುಂಬಲಾಗುವುದು.

ಕಾರವಾರದ ಗುರುಭವನ ಪ್ರಾರಂಭಿಸುವ ಬಗ್ಗೆ

1230 - ಶ್ರೀ ಪ್ರಭಾಕರ ಎಸ್. ರಾಣೆ (ಕಾರವಾರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರದ ಗುರುಭವನ ಪ್ರಾರಂಭಿಸುವ ಜವಾಬ್ದಾರಿ ಹೊತ್ತ ಮುಖ್ಯಾಧ್ಯಾಪಕರ ಭ್ರಷ್ಟಾಚಾರದ ಬಗ್ಗೆ ದೂರು ಸರಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದರೆ, ತಪ್ಪಿತಸ್ಥರ ಮೇಲೆ ಸರಕಾರ ಕೈಗೊಂಡ ಕ್ರಮವೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು)

ಅ) ಹೌದು

ಆ) ದೂರುಗಳ ಬಗ್ಗೆ ಪ್ರಾಥಮಿಕ ವಿಚಾರಣೆ ನಡೆಸಲಾಗಿದ್ದು, ದೂರುಗಳು ಸ್ಥಿರ ಪಟ್ಟಿಲ್ಲ.

ಕರ್ನಾಟಕ ವಿಶ್ವವಿದ್ಯಾನಿಲಯಗಳ ಸೆನೆಟ್ ಮತ್ತು ಸಿಂಡಿಕೇಟ್‌ಗೆ ಚುನಾವಣೆ

503 - ಶ್ರೀ ಡಿ.ಕೆ. ಶಿವಕುಮಾರ್ (ಸಾತನೂರ್) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಿಶ್ವವಿದ್ಯಾಲಯಗಳ ಕಾನೂನಿನ್ವಯ ಪ್ರಜಾಸತ್ತಾತ್ಮಕ ಅಂಗಗಳಾದ ಸೆನೆಟ್, ಸಿಂಡಿಕೇಟ್ ಮತ್ತು ಅಕಾಡೆಮಿಕ್ ಕೌನ್ಸಿಲ್‌ಗಳಿಗೆ ಚುನಾವಣೆಗಳು ನಡೆಯಬೇಕಲ್ಲವೇ?

ಆ) ಆದರೆ ಬೆಂಗಳೂರು ವಿಶ್ವವಿದ್ಯಾನಿಲಯದ ಮೇಲೆ ತಿಳಿಸಿದ ಯಾವುದೇ ಅಂಗಗಳಿಗೆ 4 ವರ್ಷಗಳಿಂದ ಚುನಾವಣೆಗಳೇ ನಡೆಯದಿರಲು ಕಾರಣವೇನು?

ಇ) ಈ ವಿಶ್ವವಿದ್ಯಾನಿಲಯದಲ್ಲಿ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಪ್ರತಿಷ್ಠಾಪನೆಗೆ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ?

ಈ) ಕರ್ನಾಟಕ ಇತರೆ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲೂ ವಿವಿಧ ಪ್ರಜಾಸತಾತ್ಮಕ ಅಂಗಗಳಾದ ಸೆನೆಟ್, ಸಿಂಡಿಕೇಟ್ ಮತ್ತು ಅಕಾಡೆಮಿಕ್ ಕೌನ್ಸಿಲ್‌ಗಳಿಗೆ ಚುನಾವಣೆಗಳು ನಡೆದಿರುವಾಗ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಮಾತ್ರ ನಡೆದಿರಲು ಸಮಸ್ಯೆಗಳು ಏನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಂಸದೀಯ ವ್ಯವಹಾರ ಸಚಿವರು)

ಅ) ಹೌದು

ಆ) ಚುನಾವಣೆಗೆ ಸಂಬಂಧಪಟ್ಟ ಅನುಶಾಸನಗಳು ಇನ್ನು ಸಿದ್ದವಾಗಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಜಿಲ್ಲಾ ಪರಿಷತ್ತಿನ ನಿರ್ಣಯಗಳ ಪ್ರಕಾರ ಪ್ರೌಢಶಾಲೆಗಳನ್ನು ಪ್ರಾರಂಭ ಮಾಡಿದರೂ ಸಹ ಅನುಮೋದನೆ ನೀಡದ ಬಗ್ಗೆ

1132 - ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?